**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 162 |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 05.12.2023 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಿಆರ್ ಝಡ್ ಮತ್ತು ನಾನ್ ಸಿಆರ್ ಝಡ್ ಎರಡೂ ವಲಯಗಳಲ್ಲಿ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆ ಸಂಪೂರ್ಣ ಸ್ಥಗಿತಗೊಂಡಿರುವುದರಿಂದ, ಜಿಲ್ಲೆಯಲ್ಲಿ ಕಟ್ಟಡ ಕಾಮಗಾರಿಗಳು ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | • ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ನಿಯಂತ್ರಣ ವಲಯ ಹೊರತುಪಡಿಸಿದ (Non-CRZ) ನದಿ ಪಾತ್ರಗಳ ವ್ಯಾಪ್ತಿಯಲ್ಲಿ ಟೆಂಡರ್-ಕಂ-ಹರಾಜು ಮೂಲಕ 25 ಮರಳು ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದ್ದು, ಪ್ರಸ್ತುತ ಸದರಿ ಮರಳು ಗುತ್ತಿಗೆ ಪ್ರದೇಶಗಳಲ್ಲಿ ಮರಳು ಗಣಿಗಾರಿಕೆಯನ್ನು ನಡೆಸಲಾಗುತ್ತಿದ್ದು, ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳನ್ನು ನೀಡಲಾಗುತ್ತಿದೆ.<br>• ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ನಿಯಂತ್ರಣ ವಲಯ ವ್ಯಾಪ್ತಿಯ (CRZ) ನದಿ ಪಾತ್ರಗಳಲ್ಲಿ **09** ಮರಳು ದಿಬ್ಬಗಳನ್ನು ಗುರುತಿಸಲಾಗಿರುತ್ತದೆ. ಸದರಿ ಮರಳು ದಿಬ್ಬಗಳನ್ನು ತೆರವುಗೊಳಿಸುವ ಸಂಬಂಧ ರಾಜ್ಯ ಕರಾವಳಿ ನಿಯಂತ್ರಣ ವಲಯ ಪ್ರಾಧಿಕಾರ (KCZMA) ಕ್ಕೆ ನಿರಾಕ್ಷೇಪಣಾ ಪತ್ರ (CRZ Clearance) ನೀಡಲು ದಿನಾಂಕ 03.10.2023 ರಂದು ಜಿಲ್ಲಾ ಕರಾವಳಿ ವಲಯ ನಿರ್ವಹಣಾ ಪ್ರಾಧಿಕಾರ (DCZMA) ದಿಂದ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ರಾಜ್ಯ ಕರಾವಳಿ ನಿಯಂತ್ರಣ ವಲಯ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರ ದೊರೆತ ನಂತರ ಮರಳು ದಿಬ್ಬಗಳನ್ನು ತೆರವುಗೊಳಿಸಿ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಸಲು ಕ್ರಮ ವಹಿಸಲಾಗುವುದು. |

. . . 2

| | | |
|---|---|---|
| (ಆ) | ಬಂದಿದ್ದಲ್ಲಿ, ನಾನ್ ಸಿಆರ್ ಝಡ್ ನಲ್ಲಿ ಈಗಾಗಲೇ ಟೆಂಡರ್ ಆಗಿದ್ದರೂ ವೇ ಬ್ರಿಡ್ಜ್ ಷರತ್ತಿನಿಂದಾಗಿ ನಿರ್ಮಾಣ ಕ್ಷೇತ್ರಕ್ಕೆ ಗುಣಮಟ್ಟದ ಮರಳು ಪೂರೈಕೆಯಾಗದೇ ಇಡೀ ನಿರ್ಮಾಣ ಕ್ಷೇತ್ರ ತೊಂದರೆಗೆ ಸಿಲುಕಿರುವುದನ್ನು ಪರಿಹರಿಸಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ; | • ಪ್ರಸ್ತುತ, ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ನಿಯಂತ್ರಣ ವಲಯ ಹೊರತುಪಡಿಸಿದ (Non-CRZ) ನದಿ ಪಾತ್ರಗಳ ವ್ಯಾಪ್ತಿಯಲ್ಲಿ ಮರಳು ಗಣಿಗಾರಿಕೆಯನ್ನು ನಡೆಸಲಾಗುತ್ತಿದೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-W(3) ರಂತೆ ಮರಳು ಸ್ಟಾಕ್ ಯಾರ್ಡ್ ಪ್ರದೇಶದಲ್ಲಿ ವೇ-ಬ್ರಿಡ್ಜ್ ಅಳವಡಿಸುವುದು ಕಡ್ಡಾಯವಾಗಿರುತ್ತದೆ.<br>• ಮುಂದುವರೆದು, ಜಿಲ್ಲೆಯಲ್ಲಿ ನಡೆಯುವ ಅಭಿವೃದ್ಧಿ ಕಾಮಗಾರಿಗಳಿಗೆ ಮರಳಿನ ಕೊರತೆ ಉಂಟಾಗಬಾರದೆಂಬ ಉದ್ದೇಶದಿಂದ ದಿನಾಂಕ 20.10.2023 ರಂದು ನಡೆದ ದಕ್ಷಿಣ ಕನ್ನಡ ಜಿಲ್ಲಾ ಮರಳು ಸಮಿತಿ ಸಭೆಯಲ್ಲಿ ದಿನಾಂಕ 30.11.2023 ರವರೆಗೆ ಮರಳು ಗುತ್ತಿಗೆದಾರರಿಗೆ ವೇ ಬ್ರಿಡ್ಜ್ ಅಳವಡಿಸುವ ಗಡುವನ್ನು ವಿಧಿಸಿ ಮರಳು ಸಾಗಾಣಿಕೆಗೆ ಪರವಾನಿಗೆಯನ್ನು ನೀಡಲಾಗುತ್ತಿದೆ.<br>• ಪ್ರಸ್ತುತ, ಈಗಾಗಲೇ 15 ಮರಳು ಗುತ್ತಿಗೆದಾರರು ವೇ-ಬ್ರಿಡ್ಜ್ ಅಳವಡಿಸಿಕೊಂಡಿರುತ್ತಾರೆ. ಉಳಿದ 10 ಮರಳು ಗುತ್ತಿಗೆದಾರರ ವೇ-ಬ್ರಿಡ್ಜ್ ಅಳವಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| (ಇ) | ವೇ ಬ್ರಿಡ್ಜ್ ಅಳವಡಿಸದೇ ಇರುವುದರಿಂದ ಪರವಾನಗಿ ನೀಡದೆ ಮರಳು ಪೂರೈಕೆದಾರರು ವೇ ಬ್ರಿಡ್ಜ್ ಅಳವಡಿಸುತ್ತಿಲ್ಲವಾದ ಕಾರಣ ದಿಂದಾಗಿ ಗುಣಮಟ್ಟದ ಮರಳು ಪೂರೈಕೆಯಲ್ಲಿ ತೀವ್ರ ವ್ಯತ್ಯಯವಾಗಿ ಇಡೀ ನಿರ್ಮಾಣ ಕ್ಷೇತ್ರ ಹಾಗೂ ಕಾರ್ಮಿಕ ವರ್ಗ ಸಮಸ್ಯೆ ಯಲ್ಲಿ ಸಿಲುಕಿರುವುದರಿಂದ ಗಣಿ ಇಲಾಖೆಯೇ ವೇ ಬ್ರಿಡ್ಜ್ ಅಳವಡಿಸಿ ಆ ಮೂಲಕ ಜಿಲ್ಲೆಯಲ್ಲಿ ಗುಣಮಟ್ಟದ ಮರಳು ಪೂರೈಕೆಗೆ ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ? | ಪ್ರಸ್ತುತ, ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ನಿಯಂತ್ರಣ ವಲಯ ಹೊರತುಪಡಿಸಿದ (Non-CRZ) ನದಿ ಪಾತ್ರಗಳ ವ್ಯಾಪ್ತಿಯಲ್ಲಿ ಮರಳು ಗುತ್ತಿಗೆದಾತರು ವೇ-ಬ್ರಿಡ್ಜ್ ಅಳವಡಿಸುತ್ತಿಲ್ಲವೆಂಬ ಕಾರಣದಿಂದ ಮರಳು ಗಣಿಗಾರಿಕೆಯನ್ನು ಸ್ಥಗಿತಗೊಳಿಸಿರುವುದಿಲ್ಲ. ಮರಳು ಸಾಗಾಣಿಕೆ ಪರವಾನಗಿಯನ್ನು ನೀಡಲಾಗುತ್ತಿದ್ದು, ಉತ್ತಮ ಗುಣಮಟ್ಟದ ಮರಳು ಜಿಲ್ಲೆಯ ಅಭಿವೃದ್ಧಿ ಕಾಮಗಾರಿಗಳಿಗೆ ಪೂರೈಕೆಯಾಗುತ್ತಿರುತ್ತದೆ. |

ಸಂಖ್ಯೆ ಸಿಐ -ಎಂಎಂಎನ್/237/2023

(ಎಸ್.ಎಸ್.ಮಲ್ಲಿಕಾರ್ಜುನ)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.